# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 425(527) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 09/03/2020. |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತುಮಕೂರು ಜಿಲ್ಲೆ, ಚಿಕ್ಕನಾಯಕನ ಹಳ್ಳಿ ತಾಲ್ಲೂಕು ದೇಶೀಯ ವಿದ್ಯಾಪೀಠ ಬಾಲಕರ ಪ್ರೌಢಶಾಲೆ ಈ ಸಂಸ್ಥೆಯ ಮುಖ್ಯೋಪಾಧ್ಯಾಯರ ಹುದ್ದೆಗೆ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇಲ್ಲಿ ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ. |
| ಆ) | ಪ್ರಸ್ತಾವನೆ ಸಲ್ಲಿಸಿದ್ದಲ್ಲಿ, ಅನುಮೋದನೆ ನೀಡಲಾಗಿದೆಯೇ; ನೀಡದೇ ಇದ್ದಲ್ಲಿ ಯಾವ ಕಾರಣಕ್ಕೆ ಪ್ರಸ್ತಾವನೆಯನ್ನು ವಿಲೆ(ಬಾಕಿ) ಇಡಲಾಗಿದೆ; | ಈ ಕೆಳಕಂಡ ಕಾರಣಗಳಿಂದಾಗಿ ಅನುಮೋದನೆಯಾಗಿರುವುದಿಲ್ಲ.<br><br>➢ ಶ್ರೀ ಮಲ್ಲಿಕಾರ್ಜುನಯ್ಯ, ಸಹ ಶಿಕ್ಷಕರು ಇವರಿಗೆ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಿ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.<br>➢ ಸದರಿ ಆಡಳಿತ ಮಂಡಳಿ ವತಿಯಿಂದ ಎರಡು ಅನುದಾನಿತ ಶಾಲೆಗಳು ನಡೆಯುತ್ತಿರುವುದರಿಂದ ಬಡ್ತಿ ಮೀಸಲಾತಿ ನಿಯಮಗಳು ಅನ್ವಯವಾಗುತ್ತದೆ.<br>➢ ಶ್ರೀ ರಂಗಸ್ವಾಮಿ, ಸಹ ಶಿಕ್ಷಕರು ಇವರು ಪರಿಶಿಷ್ಟ ಜಾತಿ ಬ್ಯಾಕ್‌ಲಾಗ್ ಹುದ್ದೆ ಎಂದು ಪರಿಗಣಿಸಿ ಬಡ್ತಿ ನೀಡುವಂತೆ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ಆಯೋಗದಲ್ಲಿ ಪ್ರಕರಣ ಸಂಖ್ಯೆ: 346/2015 ರಲ್ಲಿ ಪ್ರಕರಣ ದಾಖಲಿಸಿರುತ್ತಾರೆ. ಆಯೋಗದಿಂದ ತೀರ್ಪು ಬಂದಿರುವುದಿಲ್ಲ.<br>➢ ಶ್ರೀ ಮಲ್ಲಿಕಾರ್ಜುನಯ್ಯ, ಸಹ ಶಿಕ್ಷಕರು, ದೇಶೀಯ ವಿದ್ಯಾಪೀಠ ಬಾಲಕರ ಪ್ರೌಢಶಾಲೆ ಇವರ ಬಡ್ತಿಯ ವಿಚಾರ ಕುರಿತು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮುಂದೆ 23/2015ರಲ್ಲಿ ಪ್ರಕರಣ ದಾಖಲಿಸಿದ್ದು, ದಿನಾಂಕ: 22-01-2016 ರಲ್ಲಿ ಮೇಲ್ಮನವಿ ಪ್ರಾಧಿಕಾರಿಗಳು ಸದರಿ ಅರ್ಜಿಯನ್ನು ತಿರಸ್ಕರಿಸಿರುತ್ತಾರೆ.<br>➢ ಶ್ರೀ ಮಲ್ಲಿಕಾರ್ಜುನಯ್ಯ. ಸ.ಶಿ, ದೇಶೀಯ ವಿದ್ಯಾಪೀಠ ಬಾಲಕರ ಪ್ರೌಢಶಾಲೆ, ಚಿಕ್ಕನಾಯಕನಹಳ್ಳಿ, ಇವರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ : 12295/2016ರಲ್ಲಿ ದಾವೆ ದಾಖಲಿಸಿರುತ್ತಾರೆ. ನ್ಯಾಯಾಲಯದಲ್ಲಿ ಪ್ರಕರಣವು ವಿಚಾರಣಾ |

| | | |
|---|---|---|
| | | ಹಂತದಲ್ಲಿರುತ್ತದೆ.<br>ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಮತ್ತು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಆಯೋಗದಲ್ಲಿ ಪ್ರಕರಣ ಬಾಕಿ ಇದ್ದುದರಿಂದ ಬಡ್ತಿ ನೀಡದೇ ಆಯುಕ್ತಾಲಯದ ಕಛೇರಿ ಪತ್ರ ದಿನಾಂಕ: 05-06-2018ರಲ್ಲಿ ಪ್ರಸ್ತಾವನೆಯನ್ನು ಹಿಂದಿರುಗಿಸಲಾಗಿರುತ್ತದೆ. |
| ಇ) | ದೇಶೀಯ ವಿದ್ಯಾಪೀಠ ಸಂಸ್ಥೆಯಲ್ಲಿ ಕಳೆದ 3 ವರ್ಷಗಳಿಂದ ಎಷ್ಟು ಬಾರಿ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ; | ಆಯುಕ್ತರ ಕಛೇರಿಗೆ ಒಂದು ಬಾರಿ ಮತ್ತು ಉಪನಿರ್ದೇಶಕರು(ಆಡಳಿತ)ಸಾ.ಶಿ.ಇಲಾಖೆ ರವರ ಹಂತದಲ್ಲಿ 02 ಬಾರಿ ಪ್ರಸ್ತಾವನೆ ಸಲ್ಲಿಕೆಯಾಗಿರುತ್ತದೆ. |
| ಈ) | ಅನುಮೋದನೆ ನೀಡದಿದ್ದಲ್ಲಿ ಕಾರಣಗಳೇನು; | ಉಪ ಪ್ರಶ್ನೆ (ಆ) ರಂತೆ |
| ಉ) | ಯಾವ ಕಾಲಮಿತಿಯಲ್ಲಿ ಅನುಮೋದನೆ ನೀಡಲಾಗುವುದು; | ಉಪ ಪ್ರಶ್ನೆ(ಆ)ರಲ್ಲಿನ ವಿವರಣೆಯನ್ವಯ ಕಾಲಮಿತಿಯ ಪ್ರಶ್ನೆ ಉದ್ಭವಿಸುವುದಿಲ್ಲ. |
| ಊ) | ಮುಖ್ಯೋಪಾಧ್ಯಾಯರು ಸದರಿ ಹುದ್ದೆಯಿಂದ ಅನುಮೋದನೆಗೊಳ್ಳದೆ ನಿವೃತ್ತಿಯಾದರೆ ಅವರಿಗೆ ವೇತನ ಸೌಲಭ್ಯ ಕಡಿತವಾಗಲಿದ್ದು, ಅದನ್ನು ಸರಿದೂಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ➢ ಶ್ರೀ ಮಲ್ಲಿಕಾರ್ಜುನಯ್ಯ ಸಹ ಶಿಕ್ಷಕರು, ದೇಶೀಯ ವಿದ್ಯಾಪೀಠ ಬಾಲಕರ ಪ್ರೌಢಶಾಲೆ, ಚಿಕ್ಕನಾಯಕನಹಳ್ಳಿ ಇವರ ಜನ್ಮ ದಿನಾಂಕ: 01-06-1958 ಆಗಿದ್ದು, ದಿನಾಂಕ: 31-05-2018ಕ್ಕೆ ವಯೋ ನಿವೃತ್ತಿ ಹೊಂದಿರುತ್ತಾರೆ.<br>➢ ಸೇವಾ ನಿರತ ಶಿಕ್ಷಕರಿಗೆ ಆಡಳಿತ ಮಂಡಳಿ ನೀಡಿದ ಬಡ್ತಿಯನ್ನು ಇಲಾಖೆಯಿಂದ ನಿಯಮಾನುಸಾರ ಅನುಮೋದನೆಯಾದ ದಿನಾಂಕದಿಂದ ಮುಖ್ಯ ಶಿಕ್ಷಕರ ಬಡ್ತಿ ವೇತನ ಪಡೆಯಲು ಅರ್ಹರಿರುತ್ತಾರೆ.<br>ಮುಖ್ಯ ಶಿಕ್ಷಕರ ಬಡ್ತಿ ಇಲಾಖೆಯಿಂದ ಅನುಮೋದನೆಗೊಳ್ಳದೆ ನಿವೃತ್ತಿ ಹೊಂದಿದರೆ, ನಿವೃತ್ತಿ ಹೊಂದಿದ ಶಿಕ್ಷಕರಿಗೆ ಸರ್ಕಾರದಿಂದ ಆರ್ಥಿಕ ಸೌಲಭ್ಯಗಳನ್ನು ಸರಿದೂಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಇಪಿ 68 ಎಸ್ಇಎಸ್ 2020

**(ಎಸ್. ಸುರೇಶ್ ಕುಮಾರ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.